## ಕರ್ನಾಟಕ ವಿಧಾನ ಪರಿಷತ್ತು

| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 281 |
|---|---|---|
| ಸದಸ್ಯರ ಹೆಸರು | | ಶ್ರೀ ಎಸ್.ಎಲ್. ಭೋಜೇಗೌಡ |
| ಉತ್ತರಿಸಬೇಕಾದ ದಿನಾಂಕ | | 12-07-2018 |
| ಉತ್ತರಿಸಬೇಕಾದ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಪ್ರಶ್ನೆ | | ಉತ್ತರ |
| ಅ) | ರಾಜ್ಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು? | ಸರ್ಕಾರದ ಪತ್ರ ಸಂಖ್ಯೆ: ಇಡಿ 139 ಡಿಸಿಇ 2018, ದಿನಾಂಕ:02/07/2018ರಲ್ಲಿ 2018-19ನೇ ಶೈಕ್ಷಣಿಕ ಸಾಲಿಗೆ ಕಾರ್ಯಭಾರಕ್ಕನುಗುಣವಾಗಿ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲು ಷರತ್ತುಗಳನ್ನು ವಿಧಿಸಿ ಅನುಮತಿ ನೀಡಲಾಗಿದೆ.<br><br>ಅದರಂತೆ, 2018-19ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಪ್ರಕ್ರಿಯೆ ಚಾಲನೆಯಲ್ಲಿದೆ. |
| ಆ) | ಈ ಅತಿಥಿ ಉಪನ್ಯಾಸಕರಲ್ಲಿ ಯು.ಜಿ.ಸಿ.ಯ ಅರ್ಹತೆಯಾದ N.E.T, KEST, Ph.D, M.Phil ಪದವಿಗಳನ್ನು ಪೂರೈಸಿರುವ ಉಪನ್ಯಾಸಕರ ಸಂಖ್ಯೆ ಎಷ್ಟು; ಪೂರೈಸದ ಉಪನ್ಯಾಸಕರ ಸಂಖ್ಯೆ ಎಷ್ಟು; | ಅತಿಥಿ ಉಪನ್ಯಾಸಕರನ್ನು ಇನ್ನೂ ಆಯ್ಕೆ ಮಾಡಿಕೊಂಡಿಲ್ಲವಾದ್ದರಿಂದ ಹಾಗೂ ಆಯ್ಕೆ ಮಾಡಿಕೊಳ್ಳುವ ಪ್ರಕ್ರಿಯೆಯು ಚಾಲನೆಯಲ್ಲಿರುವುದರಿಂದ ಪ್ರಶ್ನೆ ಉದ್ಭವಿಸುವುದಿಲ್ಲ. |
| ಇ) | ಹಲವಾರು ವರ್ಷಗಳಿಂದ ಕಡಿಮೆ ವೇತನಕ್ಕೆ ಕೆಲಸ ಮಾಡುತ್ತಿರುವ ಈ ಅತಿಥಿ ಉಪನ್ಯಾಸಕರನ್ನು ಹಂತ-ಹಂತವಾಗಿ ಖಾಯಂಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? | ಅತಿಥಿ ಉಪನ್ಯಾಸಕರುಗಳು ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಯಾವುದೇ ಮಂಜೂರಾದ ಖಾಲಿ ಹುದ್ದೆಗಳ ಎದುರಾಗಿ ಕರ್ತವ್ಯ ನಿರ್ವಹಿಸುತ್ತಿಲ್ಲ. ಬದಲಾಗಿ ಆಯಾ ಶೈಕ್ಷಣಿಕ ವರ್ಷದಲ್ಲಿ ಹೆಚ್ಚುವರಿ ಕಾರ್ಯಭಾರಕ್ಕೆ ಮಾತ್ರ ಸೀಮಿತಗೊಳಿಸಿ ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರುಗಳನ್ನು ಆಯ್ಕೆ ಮಾಡಿಕೊಳ್ಳಲಾಗುತ್ತಿದೆ. ಅತಿಥಿ ಉಪನ್ಯಾಸಕರ ತಾತ್ಕಾಲಿಕ ಸೇವೆಯನ್ನು ಪರಿಗಣಿಸಿ ಅವರನ್ನು ಖಾಯಂ ಮಾಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |

ಜಿ.ಟಿ. [signature]

(ಜಿ.ಟಿ.ದೇವೇಗೌಡ)

ಉನ್ನತ ಶಿಕ್ಷಣ ಸಚಿವರು

ಇಡಿ 50 ಯುಜಿಹೆಚ್ 2018